ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಸೆಪ್ಟೆಂಬರ್ 22 , 2014

ಪತ್ರಿಕಾ ಪ್ರಕಟಣೆ

# ಮಾಧ್ಯಮದವರ ಮೇಲಿನ ಹಲ್ಲೆಗಳನ್ನು ಸಹಿಸಲಾಗದು : ಸಿದ್ದರಾಮಯ್ಯ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ) :

ಮಾಧ್ಯಮ ಪ್ರತಿನಿಧಿಗಳ ಮೇಲಿನ ಹಲ್ಲೆಗಳನ್ನು ಸಹಿಸಲಾಗದು ಎಂದು ತಿಳಿಸಿರುವ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಹಲ್ಲೆಕೋರರ ಮೇಲೆ ಕೂಡಲೇ ಕಠಿಣ ಕ್ರಮ ಕೈಗೊಳ್ಳಲಾಗುವುದು ಇಲ್ಲಿ ಇಂದು ಪ್ರಕಟಿಸಿದರು.

ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನ ಚಿಟಗುಪ್ಪದ ಕಸಾಯಿಖಾನೆಯಲ್ಲಿ ದನಗಳ ಮೂಳೆಗಳಿಂದ ಅಕ್ರಮವಾಗಿ ಡಾಲ್ಡ ತಯಾರಿಸಲಾಗುತ್ತಿದೆ ಎಂಬ ಮಾಹಿತಿ ಆಧರಿಸಿ ವರದಿ ಮಾಡಲು ಹೋದ ಕಾರ್ಯನಿರತ ಪತ್ರಕರ್ತರ ಮೇಲೆ ಭಾನುವಾರ ನಡೆದ ಹಲ್ಲೆ ಪ್ರಕರಣ ಕುರಿತು ಬೆಂಗಳೂರು ಪ್ರೆಸ್ ಕ್ಲಬ್ ಅಧ್ಯಕ್ಷ ಶ್ರೀ ಆರ್. ಶ್ರೀಧರ್ ಹಾಗೂ ಪ್ರಧಾನ ಕಾರ್ಯದರ್ಶಿ ಶ್ರೀ ಕೆ. ಸದಾಶಿವ ಶೆಣೈ ನೇತೃತ್ವದ ಕನ್ನಡ ಸುದ್ದಿ ವಾಹಿನಿಗಳ ಮುಖ್ಯಸ್ಥರ ತಂಡ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಸಂದರ್ಭದಲ್ಲಿ ಶ್ರೀ ಸಿದ್ದರಾಮಯ್ಯ ಅವರು ಮಾಧ್ಯಮದವರಿಗೆ ಈ ಭರವಸೆ ನೀಡಿದರು.

ಪ್ರಜಾಪ್ರಭುತ್ವದಲ್ಲಿ ಮಾಧ್ಯಮಗಳ ಪಾತ್ರ ಹಿರಿದು. ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಮೊಟಕುಗೊಳಿಸುವ ಯಾವುದೇ ಪ್ರಯತ್ನವನ್ನು ನಾವು ಒಪ್ಪುವುದಿಲ್ಲ ಎಂದು ಸ್ಪಷ್ಟಪಡಿಸಿದ ಶ್ರೀ ಸಿದ್ದರಾಮಯ್ಯ ಅವರು ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಆರಕ್ಷಕ ಅಪರ ಮಹಾನಿರ್ದೇಶಕ ಶ್ರೀ ಹೆಚ್. ಸಿ. ಕಿಶೋರ್ ಚಂದ್ರ ಅವರೊಂದಿಗೆ ಸ್ಥಳದಲ್ಲಿಯೇ ದೂರವಾಣಿಯ ಮೂಲಕ ಮಾತನಾಡಿ ಈ ಪ್ರಕರಣದಲ್ಲಿ ತಪ್ಪಿತಸ್ಥರೆಲ್ಲರನ್ನೂ ಕೂಡಲೇ ಬಂಧಿಸುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಅಲ್ಲದೆ, ಸಾರ್ವಜನಿಕರ ಆರೋಗ್ಯಕ್ಕೆ ಮಾರಕವಾಗುವ ಅಕ್ರಮ ಡಾಲ್ಡ ತಯಾರಿಕಾ ಚಟುವಟಿಕೆಗಳನ್ನೂ ಕೂಡಲೇ ನಿಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಬಿ ಟಿ ವಿ ಯ ವ್ಯವಸ್ಥಾಪಕ ನಿರ್ದೇಶಕ ಶ್ರೀ ಜಿ. ಎಂ. ಕುಮಾರ್. ಸಮಯ ನ್ಯೂಸ್‌ನ ಸುದ್ದಿ ವಿಭಾಗದ ಮುಖ್ಯಸ್ಥ ಶ್ರೀ ಬಿ. ವಿ. ಸೋಮಶೇಖರ್ ಕವಚೂರು, ಸುವರ್ಣ ನ್ಯೂಸ್‌ನ ಸಂಪಾದಕ ಶ್ರೀ ಕೆ. ವಿ. ಎನ್. ಸ್ವಾಮಿ ಹಾಗೂ ಸುದ್ದಿ ವಿಭಾಗದ ಮುಖ್ಯಸ್ಥ ಶ್ರೀ ಅಜಿತ್ ಹನುಮಕ್ಕನವರ್ ಅವರೂ ಈ ಮನವಿ ಸಲ್ಲಿಸಲು ಆಗಮಿಸಿದ ಮಾಧ್ಯಮ ತಂಡದಲ್ಲಿದ್ದರು.

*********

ಡಿ ಪಿ ಎಂ